# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಯಾದಗಿರಿ ಜಿಲ್ಲೆ, ಸುರಪುರ ತಾಲ್ಲೂಕಿಗೆ ಮಂಜೂರಾಗಿ ಸ್ಥಾಪನೆಯಾಗದಿರುವ ಯೋಜನಾ ಉಪ ವಿಭಾಗವನ್ನು ಸೇಡಂಗೆ ವರ್ಗಾಯಿಸಿ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 62 ಜಿಪಅ 2009 ದಿನಾಂಕ 10-06-2009.
2. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ ಕೆಆರ್‌ಆರ್‌ಡಿಎ /ಸಿ-1/2013-14/1107 ದಿನಾಂಕ 29-06-2013, 16-07-2013 ಮತ್ತು 07-08-2013.

*****

ಪ್ರಸ್ತಾವನೆ:

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ವತಿಯಿಂದ ಕರ್ನಾಟಕ ರಾಜ್ಯದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ನಿಗದಿತ ಕಾಲಾವಧಿಯೊಳಗೆ ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಅನುವಾಗುವಂತೆ ಈಗಾಗಲೇ ಸದರಿ ಯೋಜನೆಯಡಿ ಅಸ್ತಿತ್ವದಲ್ಲಿರುವ ಯೋಜನಾ ವಿಭಾಗ ಹಾಗೂ ಉಪ ವಿಭಾಗಗಳ ಜೊತೆಗೆ ಹೆಚ್ಚುವರಿಯಾಗಿ ಸುರಪುರ ತಾಲ್ಲೂಕು ಒಳಗೊಂಡಂತೆ ಇತರೆ ತಾಲ್ಲೂಕುಗಳಲ್ಲಿ ಯೋಜನಾ ಉಪ ವಿಭಾಗಗಳನ್ನು ಸೃಜಿಸಲು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 10-06-2009ರ ಸರ್ಕಾರದ ಆದೇಶದಲ್ಲಿ ಮಂಜೂರಾತಿ ನೀಡಲಾಗಿತ್ತು.

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರಗಳಲ್ಲಿ ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಗುಲ್ಬರ್ಗಾ ರವರು ದಿನಾಂಕ 22-06-2012ರ ಪತ್ರದಲ್ಲಿ ಗುಲ್ಬರ್ಗಾ ಯೋಜನಾ ಉಪ ವಿಭಾಗ, ಗುಲ್ಬರ್ಗಾ ವ್ಯಾಪ್ತಿಗೆ ಗುಲ್ಬರ್ಗಾ, ಆಳಂದ, ಅಫಜಲಪುರ ಮತ್ತು ಜೇವರ್ಗಿ ತಾಲ್ಲೂಕುಗಳು ಹಾಗೂ ಸೇಡಂ ಯೋಜನಾ ಉಪ ವಿಭಾಗಕ್ಕೆ ಸೇಡಂ, ಚಿತ್ತಾಪುರ, ಚಿಂಚೋಳಿ ತಾಲ್ಲೂಕುಗಳನ್ನು ಸೇರ್ಪಡಿಸಬಹುದಾಗಿದೆ ಎಂದು ವರದಿ ನೀಡಿದ್ದು, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸಲು ಹೆಚ್ಚುವರಿಯಾಗಿ ನೂತನ ಉಪ ವಿಭಾಗವನ್ನು ಸೇಡಂನಲ್ಲಿ ಸೃಜಿಸುವ ಬಗ್ಗೆ ಇರಬೇಕಾದ ಕಾರ್ಯಭಾರದ ವಿವರಣೆ ಹಾಗೂ ಕಾಮಗಾರಿ ಮೊತ್ತದ ವಿವರಗಳನ್ನೊಳಗೊಂಡ ವರದಿಯನ್ನು ಸಲ್ಲಿಸಿದ್ದು, ಒಟ್ಟು 91.43 ಕಿ.ಮೀ. ರಸ್ತೆ ಉದ್ದವಿದ್ದು, ಇದಕ್ಕೆ ರೂ. 3979.82 ಲಕ್ಷಗಳು ವೆಚ್ಚವಾಗುವುದೆಂದು ವರದಿ ಮಾಡುತ್ತಾ, ಸೇಡಂ ಕಂದಾಯ ಉಪ ವಿಭಾಗ ಕೇಂದ್ರವಾಗಿದ್ದು, ರೈಲ್ವೆ ಸೌಕರ್ಯ, ರಾಷ್ಟ್ರೀಯ ಹೆದ್ದಾರಿ ಸಂಪರ್ಕ ಅನುಕೂಲತೆ ಇದ್ದು ಹಾಗೂ ಕಾಳಗಿ, ಚಿತ್ತಾಪೂರ, ಚಿಂಚೋಳಿ ತಾಲ್ಲೂಕುಗಳು ಭೌಗೋಳಿಕವಾಗಿ ಸೇಡಂಗೆ ಸಮೀಪವಿರುವ ಕಾರಣ ಆಡಳಿತಾತ್ಮಕವಾಗಿ ಈ ಮೊದಲು ಮಂಜೂರಾಗಿದ್ದ ಸುರಪರ ಯೋಜನಾ ಉಪ ವಿಭಾಗಕ್ಕೆ ಬದಲಾಗಿ ಸೇಡಂನಲ್ಲಿ ಯೋಜನಾ ಉಪ ವಿಭಾಗವನ್ನು ಸ್ಥಾಪಿಸುವಂತೆ ಕೋರಿದ್ದಾರೆ.

----2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ ಸಂಖ್ಯೆ. ಗ್ರಾಅಪ 210 ಜಿಪಅ 2013, ಬೆಂಗಳೂರು, ದಿನಾಂಕ. 19-09-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಈ ಹಿಂದೆ ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 62 ಜಿಪಅ 2009 ದಿನಾಂಕ 10-06-2009ರ ಆದೇಶದಲ್ಲಿ ಯಾದಗಿರಿ ಜಿಲ್ಲೆ, ಸುರುಪುರ ತಾಲ್ಲೂಕಿಗೆ ಮಂಜೂರಾಗಿ ಸ್ಥಾಪನೆಯಾಗದಿರುವ ಯೋಜನಾ ಉಪ ವಿಭಾಗವನ್ನು ಸೇಡಂಗೆ ವರ್ಗಾಯಿಸಿ ಸ್ಥಾಪಿಸಲು ಆದೇಶಿಸಿದೆ. ಈ ಉಪ ವಿಭಾಗದಲ್ಲಿ ಸೇಡಂ, ಚಿಂಚೋಳಿ ಮತ್ತು ಚಿತ್ತಾಪುರ ತಾಲ್ಲೂಕುಗಳು ಒಳಗೊಂಡಿರುತ್ತವೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಅನಧಿಕೃತ ಟಿಪ್ಪಣಿ ಸಂಖ್ಯೆ ಗ್ರಾಅಪ 325 ಪಿಬಿಎಸ್ 2013 ದಿನಾಂಕ 25-07-2013ರ ಸಹಮತಿಯನ್ವಯ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 62 ಜಿಪಅ 2009 ದಿನಾಂಕ 10-06-2009ರಲ್ಲಿನ ಉಳಿದ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ / ಆರ್ಥಿಕ ಇಲಾಖೆ.
3. ಎಲ್ಲಾ ಪ್ರಧಾನ ಇಂಜಿನಿಯರ್‌ಗಳು / ಮುಖ್ಯ ಇಂಜಿನಿಯರ್‌ಗಳು / ಲೋಕೋಪಯೋಗಿ / ಜಲಸಂಪನ್ಮೂಲ / ಸಣ್ಣ ನೀರಾವರಿ ಇಲಾಖೆಗಳು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.

----3

9. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಯಾದಗಿರಿ ಜಿಲ್ಲೆ, ಯಾದಗಿರಿ.
10. ಖಜನಾಧಿಕಾರಿ, ಸೇಡಂ ತಾಲ್ಲೂಕು, ಸೇಡಂ.
11. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳಿಗೆ.
12. ಎಲ್ಲಾ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ.
13. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ.
14. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
15. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಡಳಿತ)
17. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ಸೇವೆಗಳು-ಎ, ಬಿ ಮತ್ತು ಸಿ ಶಾಖೆಗಳು.
18. ಗ್ರಾ.ಅ.ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
19. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
20. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.